ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ ,
ಕುಂದಾಪುರ

ಸಿ.ಸಿ. ನಂಬ್ರಃ 2059/2012

ಪ್ರಾ.ಸಾಃ2

ದಿನಾಂಕಃ 02-12-2022

| | | |
|---|---|---|
| ವಾಗ್ಮೂಲದವರ ಹೆಸರು | : | ಆನಂದ ಬಿ. |
| ತಂದೆಯ ಹೆಸರು | : | ನಾರಾಯಣ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ಎ ಎಸ್ ಐ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಭಾ. ದಂ. ಪ್ರ, ಸಂ, ಕಲಂ 299 ಸಿ ಆರ್ ಪಿ ಸಿ ರಡಿಯಲ್ಲಿ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ನಾನು 15-05-2019 ರಿಂದ ಇಲ್ಲಿಯವರೆಗೆ ಕುಂದಾಪುರ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯದಿಂದ ಒಂದು ಉದ್ಘೋಷಿತ ವಾರಂಟನ್ನು 1 ನೇ ಆರೋಪಿ ಸುನೀಲ್, 2 ನೇ ಆರೋಪಿ ಮಹೇಂದ್ರ ಎಂಬುವರ ವಿರುದ್ದ ಹೊರಡಿಸಿದ್ದು, ಅದನ್ನು ನಾನು ಪಡೆದುಕೊಂಡು ದಿಃ 18-07-2022 ರಂದು ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನ ತಲ್ಲೂರು ಗ್ರಾಮ ಎಂಬಲ್ಲಿಗೆ ಭೇಟಿ ನೀಡಿದ್ದು, ಅಲ್ಲಿನ ಸಾರ್ವಜನಿಕರನ್ನು ವಿಚಾರಿಸಲಾಗಿದ್ದು, ಆರೋಪಿಯ ಬಗ್ಗೆ ಯಾವುದೇ ವಿಚಾರಗಳು ಗೊತ್ತಾಗದೆ ತಲೆಮರೆಸಿಕೊಂಡಿರುವುದಾಗಿ ತಿಳಿದು ಬಂದಿರುತ್ತದೆ. ಆ ಕಾರಣದಿಂದ ನಾನು 30 ದಿನದೊಳಗೆ ನ್ಯಾಯಾಲಯಕ್ಕೆ ಹಾಜರಾಗಬೇಕೆಂದು ಹೇಳಿ ಟಾಂ ಟಾಂ ಮೂಲಕ ಪ್ರಚಾರ ಪಡಿಸಿದ್ದು, ನಂತರ ಉದ್ಘೋಷಿತ ವಾರಂಟಿನ ಪ್ರತಿಯನ್ನು ತಲ್ಲೂರು ಗ್ರಾಮ ಪಂಚಾಯಿತಿಯ ನೊಟೀಸ್ ಬೋರ್ಡ್ ನಲ್ಲಿ ಲಗತ್ತಿಸಲಾಗಿದ್ದು, ಇನ್ನೊಂದು ಪ್ರತಿಯನ್ನು ತಲ್ಲೂರು ಮುಖ್ಯ ಜಂಕ್ಷನ್ ಬಳಿ ಅಂಟಿಸಲಾಗಿದ್ದು, ನಂತರ ಸ್ಥಳದಲ್ಲಿ 1 ನೇ ಆರೋಪಿಯ ಉದ್ಘೋಷಿತ ಮಹಜರನ್ನು ಬೆಳಿಗ್ಗೆ 11-30 ರಿಂದ 12-15 ಗಂಟೆಯವರೆಗೆ

ಹಾಗೂ 2ನೇ ಆರೋಪಿಯ ಉದ್ಘೋಷಿತ ಮಹಜರನ್ನು ಮಧ್ಯಾಹ್ನ 12-15 ರಿಂದ 1 ಗಂಟೆಯವರೆಗೆ ಪಂಚರ ಸಮಕ್ಷಮ ತಯಾರಿಸಿ ಪಂಚರ ಸಹಿಯನ್ನು ಪಡೆದುಕೊಂಡಿರುತ್ತೇನೆ. ನಂತರ ಉದ್ಘೋಷಿತ ಪಂಚನಾಮೆ ಹಾಗೂ ವಾರಂಟನ ಪ್ರತಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿ ಈ ದಿನ ವಾರಂಟನ್ನು, ನಿವೇದನೆಯನ್ನು ಹಾಗೂ ಉದ್ಘೋಷಿತ ಪ್ರತಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-2 ರಿಂದ ನಿಪಿ-7 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ-4(ಎ) ರಿಂದ 7(ಎ) ಎಂದು ಗುರುತಿಸಲಾಯಿತು. ತಹಶೀಲ್ದಾರವರು ನೀಡಿದ ವರದಿಯನ್ನು ನಿಪಿ-8 ಮತ್ತು 9 ಎಂದು ಗುರುತಿಸಲಾಯಿತು.

ಆರೋಪಿಗಳು ತಲೆಮರೆಸಿಕೊಂಡಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ. ದಂ. ಕುಂದಾಪುರ